**ದಿನಾಂಕಃ 17.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಪಾಟೀಸವಾಲುಃ ಶ್ರೀ ಜಿ ವಿವಿ ವಕೀಲರಿಂದಃ**

ಜಮೀನಿನ ವಿಚಾರದಲ್ಲಿ ಕೇಸು ನಡೆಯುತ್ತಿದೆ ಎಂದು ಮಾಹಿತಿ ಇದೆ. ಕೇಸು ದಾಖಲಾದ ನಂತರ ಮಾಡಿಕೊಂಡ ದಾನ ಪತ್ರ ಎಂದರೆ ಸರಿ . ನಮ್ಮ ಅಜ್ಜಿಗೆ ಗೊತ್ತಿಲ್ಲದೆ ಮಾಡಿಕೊಟ್ಟಿರುತ್ತಾರೆ. ದಾನಪತ್ರವನ್ನು ಈಗಾಗಲೇ ನಿಪಿ 4 ಎಂದು ಗುರುತಿಸಲಾಗಿರುತ್ತದೆ ಎಂದರೆ ಸರಿ . ನಿಪಿ 14 ಅನ್ನು ಈಗಾಗಲೇ ನಿಪಿ 12 ಎಂದು ಗುರುತಿಸಲಾಗಿದೆ ಎಂದರೆ ಸರಿ . ನನಗೆ ಈ ವಿಚಾರದ ಬಗ್ಗೆ ಎಲ್ಲಾ ಗೊತ್ತಾಗಿಯೂ ವಿನಃ ಕಾರಣ ದಾಖಲಾತಿಗಳನ್ನು ತಂದು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಈಗಾಗಲೇ ದಾಖಲಾತಿಗಳನ್ನು ಹಾಜರು ಪಡಿಸಿದ ಕಾರಣ ನ್ಯಾಯಾಲಯದ ಸಮಯವನ್ನು ವ್ಯರ್ಥ ಮಾಡಲು ದಾಖಲಾತಿಗಳನ್ನು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಈ ವಿಚಾರಣೆಗೂ ದಾಖಲಾತಿಗಳಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಸೃಷ್ಟಿಸಲಾದ ದಾಖಲಾತಿಗಳನ್ನು ಹಾಜರು ಪಡಿಸಿ ಅದಕ್ಕೆ ಪೂರಕವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದಂತೆ ಗಣಕೀಕರಣಗೊಳಿಸಿ ಮುದ್ರಿಸಲಾಯಿತು.)

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ
ನ್ಯಾಯಾಧೀಶರು, ಚನ್ನರಾಯಪಟ್ಟಣ